## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Clean Wind Power (Tuticorin) Private Limited ಕಂಪನಿಗೆ ಗದಗ ಜಿಲ್ಲೆಯ ಗಜೇಂದ್ರಗಡ ತಾಲ್ಲೂಕಿನ ವಿವಿಧ ಗ್ರಾಮಗಳು ಹಾಗೂ ಕೊಪ್ಪಳ ಜಿಲ್ಲೆಯ ಕುಷ್ಟಗಿ ಮತ್ತು ಯಲಬುರ್ಗಾ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 150 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ::

1. ಸರ್ಕಾರದ ಆದೇಶ ಸಂಖ್ಯೆ: ಇಎನ್ 111 ಎನ್‌ಸಿಇ 2017 ದಿನಾಂಕ: 29.11.2017.
2. ಸರ್ಕಾರದ ಆದೇಶ ಸಂಖ್ಯೆ: ಇಎನ್ 180 ಎನ್‌ಸಿಇ 2018 ದಿನಾಂಕ: 29.05.2018.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ 1625 (C).

ಸಂ. 4546 ದಿನಾಂಕ 31/10/18 ಬೆಂಗಳೂರು

* * *

ಪ್ರಸ್ತಾವನೆ :-

MD KREDL

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ M/s Hero Wind Energy Private Limited ಕಂಪನಿಗೆ ಗದಗ ಜಿಲ್ಲೆಯ ಗಜೇಂದ್ರಗಡ ತಾಲ್ಲೂಕಿನ ವಿವಿಧ ಗ್ರಾಮಗಳು ಹಾಗೂ ಕೊಪ್ಪಳ ಜಿಲ್ಲೆಯ ಕುಷ್ಟಗಿ ಮತ್ತು ಯಲಬುರ್ಗಾ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರದ ಆದೇಶದಲ್ಲಿ M/s Hero Wind Energy Private Limited ಕಂಪನಿಗೆ ಗದಗ ಜಿಲ್ಲೆಯ ಗಜೇಂದ್ರಗಡ ತಾಲ್ಲೂಕಿನ ವಿವಿಧ ಗ್ರಾಮಗಳು ಹಾಗೂ ಕೊಪ್ಪಳ ಜಿಲ್ಲೆಯ ಕುಷ್ಟಗಿ ಮತ್ತು ಯಲಬುರ್ಗಾ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Clean Wind Power (Tuticorin) Private Limited ಕಂಪನಿಗೆ ವರ್ಗಾಯಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಏಕ ಕಡತ ಪದ್ಧತಿಯಡಿ M/s Clean Wind Power (Tuticorin) Private Limited ಕಂಪನಿಗೆ ಗದಗ ಜಿಲ್ಲೆಯ ಗಜೇಂದ್ರಗಡ ತಾಲ್ಲೂಕಿನ ವಿವಿಧ ಗ್ರಾಮಗಳು ಹಾಗೂ ಕೊಪ್ಪಳ ಜಿಲ್ಲೆಯ ಕುಷ್ಟಗಿ ಮತ್ತು ಯಲಬುರ್ಗಾ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 30 ಮೆ.ವ್ಯಾ ಸಾಮರ್ಥ್ಯವನ್ನು ಸ್ವಂತ ಬಳಕೆಗೆ /ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಸಲುವಾಗಿ 150 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಕೋರಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, M/s Clean Wind Power (Tuticorin) Private Limited

4683
2/11/18

....2)

Copy Attested under RTI
GM (Tech) KREDL

Public Information Officer
KREDL

ಕಂಪನಿಯು CIN No. U40106DL2016PTC308658 ರನ್ವಯ Registrar of Companies, Ministry of Corporate Affairs, Government of India, New Delhi ಇಲ್ಲಿ ದಿನಾಂಕ: 28.11.2016 ರಂದು ನೋಂದಾಣಿಗೊಂಡಿದ್ದು, ನೊಂದಾಯಿತ ಕಚೇರಿ ನವದೆಹಲಿಯಲ್ಲಿ ಸ್ಥಾಪಿತಗೊಂಡಿರುತ್ತದೆ. ಸದರಿ ಕಂಪನಿಯು M/s Hero Wind Energy Private Limited ಕಂಪನಿಯ ಅಂಗ ಸಂಸ್ಥೆಯಾಗಿದ್ದು, ದಿನಾಂಕ: 31.03.2017 ರ ಅಂತ್ಯಕ್ಕೆ ಸದರಿ ಕಂಪನಿಯ ನೆಟ್‌ವರ್ತ್ ರೂ.674.88 ಕೋಟಿಗಳಾಗಿರುವುದಾಗಿ ಚಾರ್ಟೆಡ್ ಅಕೌಂಟೆಂಡ್ ರವರು ದೃಢೀಕರಣ ಹಾಗೂ ಬ್ಯಾಲೆನ್ಸ್ ಶೀಟ್‌ಗಳನ್ನು ಸಲ್ಲಿಸಿರುತ್ತಾರೆಂದು ತಿಳಿಸುತ್ತಾ, M/s Clean Wind Power (Tuticorin) Private Limited ಕಂಪನಿಗೆ ಹಂಚಿಕೆಯಾದ 30 ಮೆ.ವ್ಯಾ ಸಾಮರ್ಥ್ಯವನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಒಡಂಬಡಿಕೆಯೊಂದಿಗೆ Captive / 3rd Party ಗೆ ಮಾರಾಟ ಮಾಡುವ ಸಲುವಾಗಿ 150 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಲು ಕೋರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ ಹಂಚಿಕೆ ಮಾಡಲು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

Geographical area description for 150 MW capacity Wind power project of M/s Clean Wind Power (Tuticorin) Private Limited

| Sl. No | Geographical area description of the project | Near by villages of the proposed area and district | Sanctioned capacity in MW | Enhancement proposed in MW | Total capacity in MW |
|---|---|---|---|---|---|
| 1 | The identified area consists of plain and non-plain area. Further, it appears that the area has multilevel activities such as agriculture, quarrying and minor irrigation etc. it has number of peaks and villages. The area is held in the following Geographical co-ordinates as:<br>Lat: 15°37'19.20'' to 15°45'0''N<br>Long: 76°0'0'' to 76°10'0''E<br>Ridge Peaks: 678, 676, 655, 669, 677, 652, 637, 670, 700, 713, 671, 696, 645, 664, 687 and 693m AMSL.<br>Toposheet No. 57A / 2. | Benchmatti, Naraskoppa, Gogeri, Matrngi and Hirekoppa Villages in Gajendragarh Taluk, Gadag District.<br>Shankapur, Yelburgi, Madalgatti, Chiknandihal, Hire Bannigol, Balutigi, Jhulkatti, Basapur, Hagedal, Tummarguddi, Bunkoppa, Dammur, Jerkunti, Salbhavi, Makkalli, Mandalmari, Vajjarbandi, Hosur, Ningalbandi, Kalakbandi, Konsagar, Matrangi and Hire Arlihalli Villages in Kustagi & Yelburga Taluks of Koppal District. | 30 MW | 120 MW | 150 MW (75 Nos x 2000 kw) |
| | Total | | | | 150 MW |

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಇಎನ್ 561 ಎನ್‌ಸಿಇ 2018 ಬೆಂಗಳೂರು, ದಿನಾಂಕ: 27.10.2018.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s Clean Wind Power (Tuticorin) Private Limited ಕಂಪನಿಗೆ ಗದಗ ಜಿಲ್ಲೆಯ ಗಜೇಂದ್ರಗಡ ತಾಲ್ಲೂಕಿನ ವಿವಿಧ ಗ್ರಾಮಗಳು ಹಾಗೂ ಕೊಪ್ಪಳ ಜಿಲ್ಲೆಯ ಕುಷ್ಟಗಿ

....3)

... Attested under RTI

... Public Information Officer
KREDL

ಮತ್ತು ಯಲಬುರ್ಗಾ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು Captive / 3rd Party ಗೆ ಮಾರಾಟ ಮಾಡುವ ಸಲುವಾಗಿ ಶೆಡ್ಯೂಲ್‌ನಲ್ಲಿರುವಂತೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗೊಳಪಟ್ಟು 150 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಿ ಆದೇಶಿಸಲಾಗಿದೆ.

Geographical area description for 150 MW capacity Wind power project of M/s Clean Wind Power (Tuticorin) Private Limited

| Sl. No | Geographical area description of the project | Near by villages of the proposed area and district | Sanctioned capacity in MW | Enhancement proposed in MW | Total capacity in MW |
|---|---|---|---|---|---|
| 1 | The identified area consists of plain and non-plain area. Further, it appears that the area has multilevel activities such as agriculture, quarrying and minor irrigation etc. it has number of peaks and villages. The area is held in the following Geographical co-ordinates as:<br>Lat: 15°37'19.20'' to 15°45'0''N<br>Long: 76°0'0'' to 76°10'0''E<br>Ridge Peaks: 678, 676, 655, 669, 677, 652, 637, 670, 700, 713, 671, 696, 645, 664, 687 and 693m AMSL.<br>Toposheet No. 57A / 2. | Benchmatti, Naraskoppa, Gogeri, Matrngi and Hirekoppa Villages in Gajendragarh Taluk, Gadag District.<br>Shankapur, Yelburgi, Madalgatti, Chiknandihal, Hire Bannigol, Balutigi, Jhulkatti, Basapur, Hagedal, Tummarguddi, Bunkoppa, Dammur, Jerkunti, Salbhavi, Makkalli, Mandalmari, Vajjarbandi, Hosur, Ningalbandi, Kalakbandi, Konsagar, Matrangi and Hire Arlihalli Villages in Kustagi & Yelburga Taluks of Koppal District. | 30 MW | 120 MW | 150 MW (75 Nos x 2000 kw) |
| | Total | | | | 150 MW |

ಷರತ್ತು ಮತ್ತು ನಿಬಂಧನೆಗಳು

1. M/s Clean Wind Power (Tuticorin) Private Limited ಕಂಪನಿಯು ನಿಯಮಾನುಸಾರ ವರ್ಗಾವಣೆ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್ ಸಂಸ್ಥೆಗೆ ಪಾವತಿಸತಕ್ಕದ್ದು.
2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
3. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
4. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

...4)

Copy Attested under RTI

Asst. Public Information Officer
KREDL

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
7. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.
8. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
9. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
10. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
11. ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
12. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.
13. ಉಳಿದಂತೆ, ವಿದ್ಯುತ್ ಖರೀದಿ ಒಪ್ಪಂದ ಮಾಡಿಕೊಳ್ಳುವ ಷರತ್ತನ್ನು ಹೊರತುಪಡಿಸಿ ಸರ್ಕಾರದ ಆದೇಶ ಸಂಖ್ಯೆ: ಇಎನ್ 111 ಎನ್‌ಸಿಇ 2017 ದಿನಾಂಕ: 29.11.2017 ಮತ್ತು ಸರ್ಕಾರದ ಆದೇಶ ಸಂಖ್ಯೆ: ಇಎನ್ 180 ಎನ್‌ಸಿಇ 2018 ದಿನಾಂಕ: 29.05.2018 ರಲ್ಲಿನ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಈ ಆದೇಶವನ್ನು ರದ್ದುಪಡಿಸುವ / ಮಾರ್ಪಡಿಸುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಮಂಜಪ್ಪ)

ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಇಂಧನ ಇಲಾಖೆ.

ಇವರಿಗೆ :
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

....5)

Copy Attested under RTI

Asst. Public Information Officer
KREDL